ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 491 |
| 2. | ಪ್ರಶ್ನೆ ಕೇಳಿದ ಸದಸ್ಯರು | ಶ್ರೀ ಎಸ್. ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | 16.12.2021 |
| 4. | ಉತ್ತರಿಸುವ ಸಚಿವರು | ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಕಳೆದ 3 ವರ್ಷಗಳಲ್ಲಿ ಎಷ್ಟು ಪ್ರಕರಣಗಳು ಕಂಡುಬಂದಿವೆ; (ಪ್ರಕರಣವಾರು ಮಾಹಿತಿ ನೀಡುವುದು) | ಹೌದು<br>ಕಳೆದ 03 ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು 07 ಶಿಷ್ಟಾಚಾರ ಉಲ್ಲಂಘನೆ ಪ್ರಕರಣಗಳು ಕಂಡುಬಂದಿದ್ದು, ಸದರಿ ಪ್ರಕರಣಗಳಲ್ಲಿ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳ ಪ್ರಕರಣವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ. |
| (ಆ) | ಈ ಪ್ರಕರಣದಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಂಡಿದ್ದಲ್ಲಿ, ಪ್ರಕರಣವಾರು ಮಾಹಿತಿ ನೀಡುವುದು; | |
| (ಇ) | ಶಿಷ್ಟಾಚಾರ ಪಾಲನೆ ಮಾಡುವ ಸಂಬಂಧ ಹಾಲಿ ಜಾರಿಯಲ್ಲಿರುವ ಕಾನೂನು/ಆದೇಶಗಳನ್ನು ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದರಿಂದ ಶಿಷ್ಟಾಚಾರ ಪಾಲನೆ ಮಾಡಲು ಇನ್ನಷ್ಟು ಪರಿಣಾಮಕಾರಿ ಕಾನೂನು ರೂಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಕೈಗೊಳ್ಳಲಾಗುವುದು? (ಮಾಹಿತಿ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 34 ಹೆಚ್‌ಪಿಎ 2018(1) ದಿನಾಂಕ:16.04.2019 ರಲ್ಲಿ ಸರ್ಕಾರಿ ಸಭೆ ಸಮಾರಂಭಗಳ ಆಯೋಜನೆಯಲ್ಲಿ ಪಾಲಿಸಬೇಕಾದ ಶಿಷ್ಟಾಚಾರ ಕುರಿತು ಸಮಗ್ರ ಸೂಚನೆಗಳನ್ನು ನೀಡಲಾಗಿದೆ. ಈ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ತರಬೇತಿಯನ್ನು ನೀಡಲಾಗಿದೆ ಮತ್ತು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಮ್ಮ ಹಂತದಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಶಿಷ್ಟಾಚಾರದ ಬಗ್ಗೆ ಪೂರ್ಣವಾಗಿ ತರಬೇತಿ ನೀಡುವಂತೆ ಸೂಚಿಸಲಾಗಿದೆ. ಶಿಷ್ಟಾಚಾರ ಲೋಪವಾದ ಪ್ರಕರಣಗಳಲ್ಲಿ ಸಂಬಂಧಪಟ್ಟವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆಂದು ಹಾಗೂ ಸಂಬಂಧಪಟ್ಟ ಅಧಿಕಾರಿಗಳಲ್ಲದೇ ಶಿಷ್ಟಾಚಾರ ಪಾಲಿಸುವುದರಲ್ಲಿ ವಿಫಲರಾದ, ಹಿರಿಯ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಸುತ್ತೋಲೆಯಲ್ಲಿ ಸೂಚಿಸಲಾಗಿದೆ. |

ಸಿಆಸುಇ 23 ಹೆಚ್‌ಇಎನ್ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

## ಅನುಬಂಧ

| ಕ್ರ ಸಂ | ಮಾನ್ಯ ಶಾಸಕರ ಹೆಸರು ಮತ್ತು ದೂರು ಅರ್ಜಿ ದಿನಾಂಕ | ದೂರಿನ ಸಂಕ್ಷಿಪ್ತ ವಿವರ | ತೆಗೆದುಕೊಂಡ ಕ್ರಮ |
|---|---|---|---|
| 1 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 28/10/2020 | ಕಡೂರು ತಾಲ್ಲೂಕಿನ ಬೀರೂರು ಪಟ್ಟಣದಲ್ಲಿ ದಿನಾಂಕ: 24.07.2020 ರಂದು ರಸ್ತೆ ಕಾಮಗಾರಿ ಶಂಕು ಸ್ಥಾಪನೆಗೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ಜಿಲ್ಲಾಧಿಕಾರಿ, ಚಿಕ್ಕಮಗಳೂರುರವರು ಮುಖ್ಯಾಧಿಕಾರಿ, ಬೀರೂರು ಪುರಸಭೆ ಇವರಿಂದ ಪಡೆದಿರುವ ವರದಿಯಲ್ಲಿ ದಿನಾಂಕ: 24.07.2020 ರಂದು ಬೀರೂರು ಪುರಸಭೆ ವತಿಯಿಂದ ರಸ್ತೆ ಕಾಮಗಾರಿಯ ಬಗ್ಗೆ ಯಾವುದೇ ಸರ್ಕಾರಿ ಕಾರ್ಯಕ್ರಮವನ್ನು ಆಯೋಜಿಸಿಲ್ಲವೆಂದು ಹಾಗೂ ಆಹ್ವಾನಪತ್ರಿಕೆ ಮುದ್ರಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. |
| 2 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 28/10/2020 | ತರೀಕೆರೆ ತಾಲ್ಲೂಕಿನಲ್ಲಿ ದಿನಾಂಕ: 08.07.2020 ರಂದು ತರೀಕೆರೆ ಎ.ಪಿ.ಎಂ.ಸಿ ಆವರಣದಲ್ಲಿ ಉದ್ಘಾಟನೆಗೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ಜಿಲ್ಲಾಧಿಕಾರಿ, ಚಿಕ್ಕಮಗಳೂರುರವರು ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ತರೀಕೆರೆ ಇವರಿಂದ ಪಡೆದಿರುವ ವರದಿಯಲ್ಲಿ, ದಿನಾಂಕ: 08.07.2020 ರಂದು ತರೀಕೆರೆ ಎ ಪಿ ಎಂ ಸಿ ಆವರಣದಲ್ಲಿ ತರೀಕೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಉದ್ಘಾಟನೆ ಬಗ್ಗೆ ಯಾವುದೇ ಸರ್ಕಾರಿ ಕಾರ್ಯಕ್ರಮವನ್ನು ಆಯೋಜಿಸಿಲ್ಲವೆಂದು ಹಾಗೂ ಆಹ್ವಾನಪತ್ರಿಕೆ ಮುದ್ರಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. |
| 3 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 28/10/2020 | ಕಡೂರು ತಾಲ್ಲೂಕಿನ ಎಮ್ಮೆದೊಡ್ಡಿ ಗ್ರಾಮದಲ್ಲಿ ದಿನಾಂಕ: 28.06.2020ರಂದು ವಿದ್ಯುತ್ ವಿತರಣಾ ಉಪಕೇಂದ್ರದ ಉದ್ಘಾಟನೆಗೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ಜಿಲ್ಲಾಧಿಕಾರಿ, ಚಿಕ್ಕಮಗಳೂರುರವರು ಕಾರ್ಯಪಾಲಕ ಇಂಜಿನಿಯರ್, ಕ.ವಿ.ಪ್ರ.ನಿ.ನಿ, ಶಿವಮೊಗ್ಗ ಇವರಿಂದ ಪಡೆದಿರುವ ವರದಿಯಲ್ಲಿ, ದಿನಾಂಕ: 24.06.2020 ರಂದು ವಿದ್ಯುತ್ ವಿತರಣಾ ಉಪಕೇಂದ್ರವನ್ನು ಪ್ರಾಯೋಗಿಕವಾಗಿ ಚಾಲನೆ ನೀಡಿದ್ದು ಉದ್ಘಾಟನೆಯಾಗಿರುವುದಿಲ್ಲ ಮತ್ತು ಈ ಬಗ್ಗೆ ಯಾವುದೇ ಸರ್ಕಾರಿ ಕಾರ್ಯಕ್ರಮವನ್ನು ಆಯೋಜಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. |
| 4 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 28/10/2020 | ಮೂಡಿಗೆರೆ ತಾಲ್ಲೂಕಿನ ಬಣಕಲ್ ಸಮೀಪ ದಿನಾಂಕ: 30.06.2020 ರಂದು ಯಾತ್ರಿ ನಿವಾಸ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ಜಿಲ್ಲಾಧಿಕಾರಿ, ಚಿಕ್ಕಮಗಳೂರುರವರು ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಚಿಕ್ಕಮಗಳೂರುರವರಿಂದ ಪಡೆದಿರುವ ವರದಿಯಲ್ಲಿ, ಯಾತ್ರಿ ನಿವಾಸ ಕಾಮಗಾರಿ ಪೂರ್ಣಗೊಂಡಿರು ವುದಿಲ್ಲ ಹಾಗೂ ಇಲಾಖೆ ವಶಕ್ಕೆ ಪಡೆದಿರುವುದಿಲ್ಲವೆಂದು ಮತ್ತು ದಿನಾಂಕ: 30.06.2020 ರಂದು ಯಾತ್ರಿನಿವಾಸ ಉದ್ಘಾಟನೆ ಬಗ್ಗೆ ಯಾವುದೇ ಸರ್ಕಾರಿ ಕಾರ್ಯಕ್ರಮವನ್ನು ಆಯೋಜಿಸಿಲ್ಲವೆಂದು ಹಾಗೂ ಆಹ್ವಾನ ಪತ್ರಿಕೆ ಮುದ್ರಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. |

| | | | |
|---|---|---|---|
| 5 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 28/10/2020 | ದಿನಾಂಕ:; 27.06.2020ರಂದು ಕಡೂರು ತಾಲ್ಲೂಕಿನ ಬಾಣೂರು ಸಮೀಪ ನೂತನ ಅಂಗನವಾಡಿ ಕಟ್ಟಡದ ಉದ್ಘಾಟನೆ ಕಾರ್ಯಕ್ರಮಕ್ಕೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ಜಿಲ್ಲಾಧಿಕಾರಿ, ಚಿಕ್ಕಮಗಳೂರುರವರು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಚಿಕ್ಕಮಗಳೂರು ಚಿಕ್ಕಮಗಳೂರುರವರಿಂದ ಪಡೆದಿರುವ ವರದಿಯಲ್ಲಿ, ಕಡೂರು ತಾಲ್ಲೂಕಿನ ಬಾಣೂರು ಸಮೀಪ ನೂತನ ಅಂಗನವಾಡಿ ಕಟ್ಟಡದ ಕಾಮಗಾರಿ ಪೂರ್ಣ ಗೊಂಡಿರುವುದಿಲ್ಲ ಹಾಗೂ ಇಲಾಖೆ ವಶಕ್ಕೆ ನೀಡಿರುವುದಿಲ್ಲವೆಂದು ಮತ್ತು ದಿನಾಂಕ: 27.06.2020ರಂದು ಯಾವುದೇ ಸರ್ಕಾರಿ ಕಾರ್ಯಕ್ರಮವನ್ನು ಆಯೋಜಿಸಿಲ್ಲವೆಂದು ಹಾಗೂ ಆಹ್ವಾನ ಪತ್ರಿಕೆ ಮುದ್ರಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. |
| 6 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 12/11/2020 | ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕಿನ ದೊಡ್ಡಪಟ್ಟಣಗೆರೆ ಗ್ರಾಮ ದಲ್ಲಿ ದಿನಾಂಕ: 30.06.2020 ರಂದು ಗ್ರಾಮಪಂಚಾಯ್ತಿ ಕಟ್ಟಡದ ಮುಂದುವರೆದ ಕಾಮಗಾರಿ ಉದ್ಘಾಟನೆ ಹಾಗೂ ಅಜ್ಜಂಪುರ ತಾಲ್ಲೂಕಿನ ಬಗ್ಗವಳ್ಳಿ ಗ್ರಾಮದ ದಿನಾಂಕ: 06.07.2020 ರಂದು ರಸ್ತೆ ಕಾಮಗಾರಿ ಶಂಕುಸ್ಥಾಪನೆ ಕಾರ್ಯಕ್ರಮಗಳಿಗೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯ್ತಿ ಚಿಕ್ಕಮಗಳೂರುರವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |
| 7 | ಶ್ರೀ ಎಸ್.ಎಲ್.ಭೋಜೇಗೌಡ, ಮಾನ್ಯ ಶಾಸಕರು, ವಿಧಾನಪರಿಷತ್ತು<br>ದಿನಾಂಕ: 06/08/2021 | ಕಡೂರು ತಾಲ್ಲೂಕು ಆಡಳಿತ ಮತ್ತು ಬಾಣೂರು ಪಂಚಾಯ್ತಿ ಸಖರಾಯಪಟ್ಟಣ ಪಂಚಾಯ್ತಿ, ಲೋಕೋಪಯೋಗಿ ಇಲಾಖೆಯ ಹಾಗೂ ರೂರಲ್ ವಾಟರ್ ಸಪ್ಲೈ ಅಧಿಕಾರಿಗಳು ಅಂಗನವಾಡಿ ಕಟ್ಟಡ ಅಂಬೇಡ್ಕರ್ ಸಮುದಾಯ ಭವನ, ಹಾಗೂ ಪಿಡಬ್ಲ್ಯೂಡಿ ರಸ್ತೆ ಉದ್ಘಾಟನೆ, ಹಾಗೂ ಜಲಜೀವನ್ ಮಿಷನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು, ಈ ಕಾರ್ಯಕ್ರಮಗಳಿಗೆ ಮಾನ್ಯ ಶಾಸಕರನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದು. | ದಿನಾಂಕ: 10.08.2021ರಂದು ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಎಚ್ಚರಿಕೆಯನ್ನು ನೀಡಲಾಗಿರುತ್ತದೆ. ನಂತರ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ಮಾನ್ಯ ಶಾಸಕರು ಭಾವಚಿತ್ರವನ್ನು ಹಾಜರುಪಡಿಸಿ ಸೂಚಿಸಿದ ಮೇರೆಗೆ ದಿನಾಂಕ: 16.08.2021ರಂದು ಮತ್ತೊಮ್ಮೆ ತಿಳುವಳಿಕೆ ಪತ್ರ ನೀಡಿ, ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಸಹ ವರದಿಯನ್ನು ಪಡೆದು, ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ. ಇವರು ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು ಇವರಿಗೆ ವರದಿ ಸಲ್ಲಿಸಿರುತ್ತಾರೆ. |